ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ: 552:ಆರ್ಆರ್‌ಸಿ:2022
(ಇ-845574)

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:28.10.2022

**<u>ಸುತ್ತೋಲೆ</u>**

**ವಿಷಯ :** 2022-23ನೇ ಸಾಲಿನ "ನಮ್ಮ ಹೊಲ ನಮ್ಮ ದಾರಿ" ಯೋಜನೆಯನ್ನು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಹಾಗೂ ರಾಜ್ಯ ಸರ್ಕಾರದ ಲೆ.ಶೀ.3054 ಯೋಜನೆಯಡಿ ಅನುಷ್ಠಾನಗೊಳಿಸುವ ಕುರಿತು ಮಾರ್ಗಸೂಚಿ.

**ಓದಲಾಗಿದೆ :**

1. 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-211 ರಲ್ಲಿ ಮಾನ್ಯ ಮುಖ್ಯಮಂತ್ರಿಗಳು ಘೋಷಿಸಿರುವ ರೀತ್ಯ
2. ಸರ್ಕಾರದ ಆದೇಶ ಸಂಖ್ಯೆ: RDC-EGS/273/2022, ಬೆಂಗಳೂರು ದಿನಾಂಕ:08.04.2022
3. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ/597/ವೆಚ್ಚ-6/2022 ದಿನಾಂಕ:20.08.2022

*****

**<u>ಪೀಠಿಕೆ:</u>**

ಗ್ರಾಮೀಣ ಪ್ರದೇಶಗಳಲ್ಲಿ ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ನರೇಗಾ ಯೋಜನೆಯಡಿ ಈ ಹಿಂದೆ ಗ್ರಾಮೀಣ ಸರ್ವಋತು ಸಂಪರ್ಕ ರಸ್ತೆಯ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಅವಕಾಶ ಕಲ್ಪಿಸಲಾಗಿತ್ತು. ಆದರೆ ಸದರಿ ಯೋಜನೆಯಡಿ ರಸ್ತೆಗಳನ್ನು ಕೊನೆಯ ಆದ್ಯತೆಯಾಗಿ ಪರಿಗಣಿಸಿ ಶೇ 10ರ ಮಿತಿಯಲ್ಲಿ ಅನುಷ್ಠಾನಗೊಳಿಸಲಾಗುತ್ತಿತ್ತು.

ರಾಜ್ಯಾದ್ಯಂತ ರೈತರ ಹೊಲಗಳಿಗೆ ಸಂಪರ್ಕ ಕಲ್ಪಿಸಲು ವ್ಯಾಪಕವಾಗಿ ಕ್ರಮ ಕೈಗೊಳ್ಳಲು ಸಾಧ್ಯವಾಗದ ಕಾರಣ, ಹಾಗೂ ರೈತರು ತಾವು ಬೆಳೆದ ಕೃಷಿ ಉತ್ಪನ್ನಗಳನ್ನು ಸಕಾಲದಲ್ಲಿ ಮಾರುಕಟ್ಟೆಗೆ ಸಾಗಿಸಲು ಅನುಕೂಲವಾಗುವಂತೆ ರಸ್ತೆಗಳನ್ನು ಅಭಿವೃದ್ಧಿಪಡಿಸುವುದು ಅತ್ಯಗತ್ಯವಾಗಿರುವುದನ್ನು ಮನಗಂಡು ಸನ್ಮಾನ್ಯ ಮುಖ್ಯಮಂತ್ರಿಗಳು **2022-23ನೇ ಆಯವ್ಯಯ ಭಾಷಣದಲ್ಲಿ <u>ಓದಲಾದ-1</u> ರ ಆಯವ್ಯಯದ ಕಂಡಿಕೆ ಸಂ:211 ರಲ್ಲಿ "2021-22ನೇ ಸಾಲಿಗೆ ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ 13 ಕೋಟಿ ಮಾನವ ದಿನಗಳ ಉದ್ಯೋಗವನ್ನು ಸೃಜಿಸುವ ಗುರಿಗೆದುರಾಗಿ 14.05 ಕೋಟಿ ಮಾನವ ದಿನಗಳನ್ನು ಸೃಜಿಸಲಾಗಿದೆ. ಈ ಯೋಜನೆಯಡಿಯಲ್ಲಿ ರೈತರು ತಮ್ಮ ಹೊಲಕ್ಕೆ ಹೋಗುವ ರಸ್ತೆಗಳನ್ನು ಆದ್ಯತೆ ಮೇಲೆ ತೆಗೆದುಕೊಳ್ಳಲಾಗುವುದು"** ಎಂದು ಘೋಷಣೆ ಮಾಡಿರುತ್ತಾರೆ.

ಆದ್ದರಿಂದ, 2022-23 ನೇ ಸಾಲಿನ ನರೇಗಾ ಯೋಜನೆಯ ಕಾರ್ಯಾಚರಣೆಯ ಮಾರ್ಗಸೂಚಿಗಳಂತೆ ರೈತರ ಹೊಲ/ಗದ್ದೆ/ತೋಟ/ಜಮೀನುಗಳಿಗೆ ರಸ್ತೆ ಸಂಪರ್ಕವನ್ನು ಕಲ್ಪಿಸುವ ಕಾಮಗಾರಿಗಳನ್ನು ತೆಗೆದುಕೊಳ್ಳಲು ತೀರ್ಮಾನಿಸಿ, ಯೋಜನೆಯ ಒಟ್ಟು ಕಾರ್ಮಿಕ ಆಯ್ಯವ್ಯಯದ ಶೇ 25 ರ ಮಿತಿಯಲ್ಲಿ ಅನುಷ್ಠಾನಗೊಳಿಸಲು <u>ಓದಲಾದ-2</u> ರಲ್ಲಿ ಆದೇಶಿಸಲಾಗಿದೆ.

ಮೇಲಿನ ಹಿನ್ನೆಲೆಯಲ್ಲಿ, ರಾಜ್ಯದ **189** ಗ್ರಾಮೀಣ ವಿ.ಸ.ಕ್ಷೇತ್ರಗಳಲ್ಲಿ ಪ್ರತಿ ಕ್ಷೇತ್ರಕ್ಕೆ **30** ಕಿ.ಮೀ ನಂತೆ ರೈತರ ಹೊಲಗಳಿಗೆ ಹೋಗುವ ದಾರಿಗಳನ್ನು ನಿರ್ಮಾಣ ಮಾಡಲು **<u>"ನಮ್ಮ ಹೊಲ ನಮ್ಮ ದಾರಿ"</u>** ಎಂಬ ಯೋಜನೆಯನ್ನು ರೂಪಿಸಿ, ಸದರಿ ಯೋಜನೆಗೆ ರಾಜ್ಯ ಸರ್ಕಾರದ ಲೆಕ್ಕ ಶೀ. 3054 ರಡಿ ಮತ್ತು ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಒಗ್ಗೂಡಿಸುವಿಕೆಯೊಂದಿಗೆ ಅನುದಾನವನ್ನು ಬಳಸಿಕೊಂಡು ಅನುಷ್ಠಾನಗೊಳಿಸಲು ಸರ್ಕಾರವು ತೀರ್ಮಾನಿಸಿದೆ.

ಮುಂದುವರೆದು, <u>ಓದಲಾದ-3</u>ರಲ್ಲಿ ರಾಜ್ಯದ **189** ಗ್ರಾಮೀಣ ವಿ.ಸ.ಕ್ಷೇತ್ರ ವ್ಯಾಪ್ತಿಯಲ್ಲಿ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ **30** ಕಿ.ಮೀ ನಂತೆ , ಪ್ರತಿ ಕಿ.ಮೀಗೆ **12.50** ಲಕ್ಷದಂತೆ ನಿಗಧಿಪಡಿಸಿ, ಅದರಂತೆ, ಒಟ್ಟಾರೆ **5670.00** ಕಿಮೀ ರಸ್ತೆಯನ್ನು ಅಭಿವೃದ್ಧಿಪಡಿಸಲು ರೂ.**708.75** ಕೋಟಿಗಳಲ್ಲಿ, MGNREGA ಯೋಜನೆಯಿಂದ ಪ್ರತಿ ಕಿ.ಮೀ ರಸ್ತೆಯನ್ನು ಅಭಿವೃದ್ಧಿಪಡಿಸಲು **ರೂ.9.00** ಲಕ್ಷದಂತೆ ಒಟ್ಟು **ರೂ.510.30 ಕೋಟಿ** ಹಾಗೂ ರಾಜ್ಯ ಸರ್ಕಾರದಿಂದ ಲೆಕ್ಕ ಶೀ 3054 ರಡಿ ಪ್ರತಿ ಕಿ.ಮೀ ರಸ್ತೆಯನ್ನು ಅಭಿವೃದಿಪಡಿಸಲು ರೂ.**3.50** ಲಕ್ಷದಂತೆ ಒಟ್ಟು **198.45** ಕೋಟಿಗಳನ್ನು ಭರಿಸಲು ಆರ್ಥಿಕ ಇಲಾಖೆಯು ಸಹಮತಿ ನೀಡಿರುತ್ತದೆ.

ಅದರಂತೆ ಮೇಲ್ಕಂಡ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಈ ಮಾರ್ಗಸೂಚಿಗಳು.

**ಯೋಜನೆಯ ಆಶಯಗಳು:**

1. ರೈತರ ಹೊಲ/ಗದ್ದೆ/ತೋಟ/ಜಮೀನುಗಳಿಗೆ ರಸ್ತೆ ಸಂಪರ್ಕವನ್ನು ಕಲ್ಪಿಸುವುದು.
2. ರೈತರು ತಮ್ಮ ಜಮೀನುಗಳಲ್ಲಿ ಬೆಳೆದ ಕೃಷಿ ಉತ್ಪನ್ನಗಳನ್ನು ಮಾರುಕಟ್ಟೆಗೆ ಸಾಗಾಣಿಕೆ ಮಾಡಲು ಅನುಕೂಲ ಮಾಡುವುದು.

3. ರೈತರ ಕೃಷಿ ಉತ್ಪನ್ನಗಳನ್ನು ಮಾರುಕಟ್ಟೆಗೆ ಸಾಗಿಸಲು ಸಾರಿಗೆ ವೆಚ್ಚ ತಗ್ಗಿಸುವುದು.
4. ಸಾರ್ವಜನಿಕರು ಹಾಗೂ ರೈತರು ಸುರಕ್ಷಿತವಾಗಿ, ಸುಗಮವಾಗಿ ಸಂಚರಿಸುವುದು.
5. ಗ್ರಾಮೀಣ ಜನತೆಗೆ ಉದ್ಯೋಗವಕಾಶವನ್ನು ಕಲ್ಪಿಸುವುದು ಹಾಗೂ ಆರ್ಥಿಕವಾಗಿ ಸ್ವಾವಲಂಬಿಗಳಾಗುವಂತೆ ಮಾಡುವುದು.
6. ಗ್ರಾಮೀಣ ಜನತೆಯ ಜೀವನಮಟ್ಟ ಸುಧಾರಿಸಲು ಮತ್ತು ನಗರ ಪ್ರದೇಶಗಳಿಗೆ ವಲಸೆ ಹೋಗದಂತೆ ಕಡಿವಾಣ ಹಾಕುವುದು.

**ರಸ್ತೆ ಕಾಮಗಾರಿಗಳನ್ನು ಆಯ್ಕೆ ಮಾಡುವ ವಿಧಾನ**

1. ಸರ್ಕಾರವು ನಿಗದಿಪಡಿಸಿದ ಮಿತಿಗೆ ಅನುಗುಣವಾಗಿ ರಸ್ತೆ ಕಾಮಗಾರಿಗಳನ್ನು ಆಯ್ಕೆ ಮಾಡುವುದು.
2. ಅತೀ ಹೆಚ್ಚು ಬಳಕೆಯಾಗುವ ಮತ್ತು ಹೆಚ್ಚಿನ ರೈತರು ಅವಲಂಬಿತವಾದ ರಸ್ತೆಗಳನ್ನು ಮಾತ್ರ ಆಯ್ಕೆ ಮಾಡುವುದು.
3. ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ತಾಲ್ಲೂಕು ಕಾರ್ಯಕ್ರಮ ಅಧಿಕಾರಿಯಾದ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಸಂಬಂಧಪಟ್ಟ ತಮ್ಮ ಶಾಸಕರೊಂದಿಗೆ ಸಮಾಲೋಚನೆ ನಡೆಸಿ ತಮ್ಮ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಅಗತ್ಯವಾಗಿ ಕೈಗೆತ್ತಿಕೊಳ್ಳಬೇಕಾದ ರಸ್ತೆ ಕಾಮಗಾರಿಗಳನ್ನು ಆಯ್ಕೆ ಮಾಡುವುದು.
4. ರಸ್ತೆ ಕಾಮಗಾರಿಗಳ ಆಯ್ಕೆ ಪ್ರಕ್ರಿಯೆಯಲ್ಲಿ ಕಂದಾಯ ಇಲಾಖೆ ಮತ್ತು PRED ಅಧಿಕಾರಿಗಳ ಅಭಿಪ್ರಾಯಗಳನ್ನು ಪರಿಗಣಿಸಿ ಆಯ್ಕೆಪಟ್ಟಿಯನ್ನು ಅಂತಿಮಗೊಳಿಸುವುದು.
5. ಆಯ್ಕೆಯಾದ ಕಾಮಗಾರಿಗಳಿಗೆ ಸಂಬಂಧಪಟ್ಟ ಗ್ರಾಮ ಪಂಚಾಯಿತಿಯ ಗ್ರಾಮ ಸಭೆಯಲ್ಲಿ ಅನುಮೋದನೆ ಪಡೆದು ಸದರಿ ಕಾಮಗಾರಿಗಳಿಗೆ 2022-23 ನೇ ಸಾಲಿಗೆ ವಿಶೇಷ ಕ್ರಿಯಾ ಯೋಜನೆಯನ್ನು ರೂಪಿಸಿ ಸಕ್ಷಮ ಪ್ರಾಧಿಕಾರದಿಂದ ಅನುಮೋದಿಸಿಕೊಂಡು ಅನುಷ್ಠಾನಗೊಳಿಸುವುದು.
6. ಕಾರ್ಯಕ್ರಮ ಅನುಷ್ಠಾನದ ಎಲ್ಲಾ ಹಂತಗಳಲ್ಲಿ ಜನರ ಸಹಭಾಗಿತ್ವವನ್ನು ಅವಶ್ಯಕವಾಗಿ ತೊಡಗಿಸಿಕೊಳ್ಳುವುದು.

**ಮಾನದಂಡಗಳು ಹಾಗೂ ಕಾರ್ಯಕ್ರಮ ಅನುಷ್ಠಾನ:**

1. ಕಂದಾಯ ಇಲಾಖೆಯು ಸರ್ವೆ ಮಾಡಿರುವ ಗ್ರಾಮ ನಕಾಶೆ ದಾಖಲೆಯಲ್ಲಿರುವ ಅಧಿಕೃತ (ಸಾರ್ವಜನಿಕ ರಸ್ತೆ/ಬಂಡಿದಾರಿ/ಕಾಲುದಾರಿ) ರಸ್ತೆಗಳನ್ನು ತೆಗೆದುಕೊಳ್ಳುವುದು.
2. ಒಂದು ವೇಳೆ ರಸ್ತೆ ಸಂಪರ್ಕಕ್ಕಾಗಿ ಖಾಸಗಿ ಸ್ವತ್ತಿನಲ್ಲಿ ಈ ಸಂಪರ್ಕವನ್ನು ಮಾಡಬೇಕಾದಲ್ಲಿ ನೊಂದಾಯಿತ ದಾನ (Registered Gift Deed) ಪತ್ರವನ್ನು ಭೂ ಮಾಲೀಕರಿಂದ ಗ್ರಾಮ ಪಂಚಾಯಿತಿಯ ಹೆಸರಿಗೆ ಉಪನೋಂದಾಣಾಧಿಕಾರಿ ಕಛೇರಿಯಲ್ಲಿ ನೋಂದಣಿ ಮಾಡಿಕೊಳ್ಳುವುದು. ಹಾಗೂ ಇದಕ್ಕಾಗಿ ಭೂ ಮಾಲೀಕರಿಗೆ ಯಾವುದೇ ಪರಿಹಾರ ನೀಡಲಾಗುವುದಿಲ್ಲ.
3. ರೈತರ ಜಮೀನುಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಒಂದು ವೇಳೆ ಭೂಸ್ವಾಧೀನ ಪಡಿಸಿಕೊಳ್ಳಬೇಕಿದ್ದಲ್ಲಿ ಭೂಸ್ವಾಧೀನ ಪರಿಹಾರಕ್ಕಾಗಿ ಸರ್ಕಾರದಿಂದ ಯಾವುದೇ ಅನುದಾನ ಒದಗಿಸಲಾಗುವುದಿಲ್ಲ ಹಾಗಾಗಿ ರೈತರ ಮನವೊಲಿಸಿ ರಸ್ತೆ ಅಭಿವೃದ್ಧಿಪಡಿಸುವುದು ಹಾಗೂ ಒಂದು ವೇಳೆ ರೈತರು ಒಪ್ಪದಿದ್ದಲ್ಲಿ ಅಂತಹ ರಸ್ತೆಯನ್ನು ಪರಿಗಣಿಸದೆ ಬೇರೆ ರಸ್ತೆಯನ್ನು ಆಯ್ಕೆ ಮಾಡುವುದು.
4. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕಾಮಗಾರಿಗಳನ್ನು ನಿರ್ವಹಿಸುವಾಗ ಕೂಲಿ ಮತ್ತು ಸಾಮಾಗ್ರಿಗಳ 60:40ರ ಅನುಪಾತವನ್ನು ಕಡ್ಡಾಯವಾಗಿ ಪಾಲನೆ ಮಾಡುವುದು. (ಗ್ರಾಮ ಪಂಚಾಯಿತಿಯ ಮಟ್ಟದಲ್ಲಿ)
5. ಕಾಮಗಾರಿಯ ಅನುಷ್ಠಾನವನ್ನು ಸಾಕಷ್ಟು ಕೂಲಿ ಬೇಡಿಕೆ ಇರುವುದನ್ನು ಖಚಿತಪಡಿಸಿಕೊಂಡು ಅನುಷ್ಠಾನಗೊಳಿಸುವುದು.
6. ಕಾಮಗಾರಿಯ ಅಕುಶಲ ಕೆಲಸವನ್ನು ಕೇವಲ ನೋಂದಾಯಿತ (ಉದ್ಯೋಗ ಚೀಟಿ ಹೊಂದಿದ) ಕೂಲಿಕಾರರಿಂದ ನಿರ್ವಹಿಸತಕ್ಕದ್ದು.
7. ನರೇಗಾ ಯೋಜನೆಯ ಮಾರ್ಗಸೂಚಿಗಳಂತೆ ಕಡ್ಡಾಯವಾಗಿ ಗ್ರಾಮ ಸಭಾ ಅನುಮೋದನೆಯಾದ ನಂತರ ಕ್ರಿಯಾಯೋಜನೆಯಲ್ಲಿ ಸೇರಿಸಿಕೊಂಡು ಅನುಷ್ಠಾನಗೊಳಿಸುವುದು.
8. ಗ್ರಾಮ ಪಂಚಾಯತ್ ಮಟ್ಟದಲ್ಲಿ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿ ಜಿಲ್ಲಾ ಪಂಚಾಯಿತಿಗಳಿಂದ ಆಡಳಿತಾತ್ಮಕ ಅನುಮೋದನೆ ನೀಡುವುದು.
9. ಅನುಮೋದಿತ ಕ್ರಿಯಾ ಯೋಜನೆಗಳನ್ವಯ ಗ್ರಾಮ ಪಂಚಾಯಿತಿ/ತಾಲ್ಲೂಕು ಪಂಚಾಯಿತಿ ಮಟ್ಟದಲ್ಲಿ KTPP ನಿಯಾಮಾನುಸಾರ ಕಾಮಗಾರಿಯನ್ನು ಪೂರ್ಣಗೊಳಿಸುವುದು.
10. ಸರ್ಕಾರದಿಂದ ಲೆಕ್ಕ ಶೀರ್ಷಿಕೆ 3054 ರಡಿ ಬಿಡುಗಡೆಯಾದ ಅನುದಾನಕ್ಕೆ ಸಂಬಂಧಿಸಿದಂತೆ ಕಾಮಗಾರಿಯ ವಾಸ್ತವಿಕ ಸ್ಥಿತಿಯ ಛಾಯಾಚಿತ್ರ, ಕಾಮಗಾರಿ ಪ್ರಾರಂಭಗೊಂಡ ತರುವಾಯದ ಛಾಯಾಚಿತ್ರ ಮತ್ತು ಪೂರ್ಣಗೊಂಡ ಕಾಮಗಾರಿಯ ಛಾಯಾಚಿತ್ರವನ್ನು ಕಾಮಗಾರಿಗಳ ವಿವರದೊಂದಿಗೆ NGSK ತಂತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸುವುದು.
11. ಮಹತ್ಮಾ ಗಾಂಧಿ ನರೇಗಾ ಯೋಜನೆಯಡಿ ಕೈಗೊಂಡ ಕಾಮಗಾರಿಗಳಿಗೆ ಮೂರು ವಿಭಿನ್ನ ಹಂತಗಳಲ್ಲಿ ಜಿಯೋ-ಟ್ಯಾಗ್ ಮಾಡುವುದು ಅಂದರೆ ಕಾಮಗಾರಿ ನಡೆಯುವ ಮೊದಲು, ಕಾಮಗಾರಿ ನಡೆಯುವ ಸಮಯದಲ್ಲಿ ಮತ್ತು ಕಾಮಗಾರಿ ಪೂರ್ಣಗೊಳಿಸಿದ ನಂತರ ನಿರ್ವಹಿಸುವುದು.

12. ಸದರಿ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಜಿಲ್ಲೆ/ತಾಲ್ಲೂಕು/ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಇತರೆ ಯಾವುದೇ ಯೋಜನೆ/ಅನುದಾನಗಳು ಲಭ್ಯವಿದ್ದಲ್ಲಿ ಒಗ್ಗೂಡಿಸುವಿಕೆ ಮೂಲಕ ಅನುಷ್ಠಾನಗೊಳಿಸುವುದು.
13. ಸಂಪರ್ಕ ರಸ್ತೆಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಮಾರ್ಗದಲ್ಲಿ ಬರುವ ಚಿಕ್ಕ ಸೇತುವೆಗಳು, ಮೋರಿಗಳು ಇತ್ಯಾದಿ ಸಹ ಕೈಗೆತ್ತಿಕೊಳ್ಳುವುದು.
14. ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ (ಪ್ರತಿ ರಸ್ತೆಗೆ ರೂ.9.00 ಲಕ್ಷ) ರಸ್ತೆ ಕಾಮಗಾರಿಗಳನ್ನು ನೊಂದಾಯಿತ ಜಾಬ್‌ಕಾರ್ಡ್ ಹೊಂದಿರುವ ಕೂಲಿಕಾರರಿಂದ ಮಾತ್ರ ನಿರ್ವಹಿಸತಕ್ಕದ್ದು ಮತ್ತು ಯೋಜನೆಯಡಿ ಅನುಮತಿಸಲ್ಪಟ್ಟ ಯಂತ್ರಗಳನ್ನು ಹೊರತುಪಡಿಸಿ ಇತರೆ ಯಾವುದೇ ಯಂತ್ರಗಳನ್ನು ಬಳಸತಕ್ಕದ್ದಲ್ಲ.
15. ರಸ್ತೆ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವಲ್ಲಿ ಕೇಂದ್ರ ಸರ್ಕಾರ ನೀಡಿರುವ ಮಹತ್ಮಾ ಗಾಂಧಿ ನರೇಗಾ ಯೋಜನೆಯ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
16. ರಸ್ತೆ ಕಾಮಗಾರಿಗಳಿಗೆ ಯಂತ್ರಗಳನ್ನು ಬಳಸುವ ಅವಶ್ಯಕತೆಯಿದ್ದಲ್ಲಿ ರಾಜ್ಯ ಸರ್ಕಾರದ ಲೆಕ್ಕ ಶೀರ್ಷಿಕೆ 3054 ಯೋಜನೆಯಡಿ (ಪ್ರತಿ ರಸ್ತೆಗೆ ರೂ.3.50 ಲಕ್ಷ) ನಿರ್ವಹಿಸುವುದು.

**<u>ಗ್ರಾಮ ಪಂಚಾಯಿತಿ ಮಟ್ಟದಲ್ಲಿ:</u>**

- ಗ್ರಾಮ ಪಂಚಾಯಿತಿಗಳು ಈ ಯೋಜನೆಯಡಿ ಆಯ್ಕೆ ಮಾಡುವ ರಸ್ತೆ ಕಾಮಗಾರಿಗಳಿಗೆ ಗ್ರಾಮ ಸಭೆಯ ಅನುಮೋದನೆ ಪಡೆಯುವುದು.

- ಸಮುದಾಯದ ಹಿತಾಸಕ್ತಿಯನ್ನು ಕಾಪಾಡುವ ಸಲುವಾಗಿ ಜನ ಸಹಭಾಗಿತ್ವದೊಂದಿಗೆ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವುದು.

- ಗ್ರಾಮ ಪಂಚಾಯಿತಿಗಳು ಕ್ರಿಯಾ ಯೋಜನೆಗಳನ್ನು ಸಿದ್ಧಪಡಿಸಿ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸಲ್ಲಿಸುವುದು.

- ಈ ಯೋಜನೆಯ ಕಾಮಾಗಾರಿಗಳಲ್ಲಿ ಕೆ.ಟಿ.ಪಿ.ಪಿ ಅಧಿನಿಯಮವನ್ನು ಅನುಸರಿಸಿ, ನಿಯಾಮಾನುಸಾರ ಕಾಮಗಾರಿಯನ್ನು ಅನುಷ್ಠಾನಗೊಳಿಸುವುದು.

- ಕಾರ್ಯಕ್ರಮದ ಪ್ರಗತಿಯ ವರದಿಯನ್ನು ಮಾಡುವಾಗ ಸೂಕ್ತವಾದ ಛಾಯಾ ಚಿತ್ರಗಳು ಮತ್ತು ವಿಡಿಯೋ ಚಿತ್ರಗಳನ್ನು ದಾಖಲೆಯ ರೂಪದಲ್ಲಿ ನಿರ್ವಹಿಸುವುದನ್ನು ಖಾತರಿ ಪಡಿಸುವುದು ಪಂಚಾಯಿತಿ ಮಟ್ಟದ ಅಧಿಕಾರಿಯ ಜವಾಬ್ದಾರಿಯಾಗಿರುತ್ತದೆ.

- ಈ ಯೋಜನೆಯಡಿ ಕೈಗೆತ್ತಿಕೊಂಡ ಕಾಮಗಾರಿಗಳ ಪ್ರಗತಿ ವರದಿಯನ್ನು ಪ್ರತಿ ಮಾಹೆ ಸಲ್ಲಿಸುವುದು.

**<u>ತಾಲ್ಲೂಕು ಪಂಚಾಯಿತಿ ಮಟ್ಟದಲ್ಲಿ :</u>**

- ಕಾರ್ಯನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಆಡಳಿತಾತ್ಮಕ ತಂಡವನ್ನು ರಚಿಸಿ ತಾಲ್ಲೂಕು ಮಟ್ಟದಲ್ಲಿ ತಾಂತ್ರಿಕ ತಂಡವನ್ನು (ಸಹಾಯಕ ಕಾರ್ಯಪಾಲಕ ಅಭಿಯಂತರರು/ಕಂದಾಯ ಇಲಾಖೆ ಅಧಿಕಾರಿಗಳು) ಒಳಗೊಂಡಂತೆ ಸೂಕ್ತ ರಸ್ತೆ ಕಾಮಗಾರಿಗಳನ್ನು ವೈಜ್ಞಾನಿಕವಾಗಿ ಗುರುತಿಸಿ, ಧೃಡಿಕರೀಸಿ ನಿಯಾಮಾನುಸಾರ ಕ್ರಿಯಾ ಯೋಜನೆ ರೂಪಿಸುವುದು.

- ಕಾರ್ಯನಿರ್ವಾಹಕ ಅಧಿಕಾರಿಗಳು ಗ್ರಾಮ ಪಂಚಾಯಿತಿಗಳಿಂದ ಸ್ವೀಕೃತವಾದ ಕ್ರಿಯಾ ಯೋಜನೆಯನ್ನು ಪರಿಶೀಲಿಸಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅನುಮೋದನೆಗೆ ಸಲ್ಲಿಸುವುದು._

- ಸದರಿ ಯೋಜನೆಗೆ ಆರ್ಥಿಕ ದೇಣಿಗೆ, ಶಾಸಕರ ಕ್ಷೇತ್ರಾಭಿವೃದ್ಧಿ ಅನುದಾನ, CSR ಅನುದಾನಗಳನ್ನು ಒಗ್ಗೂಡಿಸಲು ಆದ್ಯತೆ ನೀಡುವುದು._

- ಈ ಯೋಜನೆಯಡಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸುತ್ತಿರುವ ಅನುಷ್ಠಾನ ಸಂಸ್ಥೆಗಳ ಪ್ರಗತಿಯನ್ನು ಪ್ರತಿ ಮಾಹೆ ಪರಿಶೀಲಿಸುವುದು.

**<u>ಜಿಲ್ಲಾ ಪಂಚಾಯಿತಿ ಮಟ್ಟದಲ್ಲಿ:</u>**

- ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸರ್ಕಾರವು ನಿಗಧಿಪಡಿಸಿದ ಗುರಿಗಳಿಗೆ ಅನುಗುಣವಾಗಿ ಆಯ್ಕೆಯಾಗಿ, ಗ್ರಾಮ ಸಭೆಯಲ್ಲಿ ಅನುಮೋದಿಸಲ್ಪಟ್ಟ, ರಸ್ತೆ ಕಾಮಗಾರಿಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡುವುದು.

- ಸದರಿ ಯೋಜನೆಗೆ ಆರ್ಥಿಕ ದೇಣಿಗೆ ,ಶಾಸಕರ ಕ್ಷೇತ್ರಾಭಿವೃದ್ಧಿ ಅನುದಾನ, CSR ಅನುದಾನಗಳನ್ನು ಒಗ್ಗೂಡಿಸುವುದು.

- ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲೆಯ ನೋಡೆಲ್ ಅಧಿಕಾರಿಗಳಾಗಿರುತ್ತಾರೆ ಮತ್ತು ಜಿಲ್ಲಾ ಮಟ್ಟದಲ್ಲಿ ಸದರಿ ಕಾರ್ಯಕ್ರಮದ ಒಟ್ಟಾರೆ ಉಸ್ತುವಾರಿ ಮಾಡುವ ಜವಾಬ್ದಾರಿಯಾಗಿರುತ್ತದೆ.

<u>**ಜಿಲ್ಲಾ ನೋಡೆಲ್ ಅಧಿಕಾರಿ (DNO) ರವರ ಕರ್ತವ್ಯಗಳು ಮತ್ತು ಜವಾಬ್ದಾರಿಗಳು:**</u>

1. ಕಾರ್ಯಕ್ರಮದ ಅನುಷ್ಠಾನ ಮತ್ತು ಕಾಲಮಿತಿಯಲ್ಲಿ ಪೂರ್ಣಗೊಳಿಸುವುದನ್ನು ಖಚಿತ ಪಡಿಸಿಕೊಳ್ಳುವುದು
2. ವಿವರವಾದ ಯೋಜನಾ ವರದಿಯನು (ಡಿಪಿಆರ್) ಸಿದ್ದಪಡಿಸಿಕೊಳ್ಳುವುದು.
3. ಅನುದಾನದ ಮೂಲಗಳನ್ನು ಮೀಸಲಿರಿಸುವ ವ್ಯವಸ್ಥೆಗೆ ಅನುಮೋದನೆ ನೀಡುವುದು.
4. ಕುಂದು ಕೊರತೆಗಳ ನಿವಾರಣೆಗೆ ಮತ್ತು ದೋಷ ನಿವಾರಣೆಗೆ ಜವಾಬ್ದಾರರಾಗಿರುತ್ತಾರೆ.

**ತಾಂತ್ರಿಕ ರೂಪುರೇಷೆ:**

ನಮ್ಮ ಹೊಲ ನಮ್ಮ ದಾರಿ ಯೋಜನೆಯಡಿ ಪ್ರತಿ ಕಿ.ಮೀ ರಸ್ತೆ ನಿರ್ಮಾಣಕ್ಕೆ ನಿಗಧಿಪಡಿಸಿರುವ ರೂ.**12.50** ಲಕ್ಷಗಳ ಮೊತ್ತದಲ್ಲಿ ಪ್ರತಿ **1.00** ಕಿ.ಮೀ ಉದ್ದದ ರಸ್ತೆ ನಿರ್ಮಾಣದಲ್ಲಿ Formation of Road ಮತ್ತು **2** ಪದರ ಖಡೀಕರಣದ (Grade-2 & Grade-3 Metalling) ಅಂದಾಜು ಪಟ್ಟಿಯಲ್ಲಿ MGNREGA ಯೋಜನೆಯಡಿ ಮತ್ತು ರಾಜ್ಯ ಸರ್ಕಾರದ ಲೆಕ್ಕ ಶೀರ್ಷಿಕೆ 3054 ಯೋಜನೆಯಡಿ ಕೈಗೊಳ್ಳಬೇಕಾಗಿರುವ ಕಾಮಗಾರಿಗಳನ್ನು ಈ ಕೆಳಕಂಡಂತೆ ನಿಗಧಿಪಡಿಸಲಾಗಿದೆ.

1. MGNREGA ಯೋಜನೆಯಡಿ ನಿಗಧಿಪಡಿಸಿರುವ ರೂ.9.00 ಲಕ್ಷಗಳಲ್ಲಿ

- 03.75 ಮೀ ಅಗಲದ 01.00 ಕಿ.ಮೀ ಉದ್ದದ ರಸ್ತೆಯಲ್ಲಿ Formation of road ಮತ್ತು
- 03.75 ಮೀ ಅಗಲದ 01.00 ಕಿ.ಮೀ ಉದ್ದದ ರಸ್ತೆಯಲ್ಲಿ Grade-2 Metalling (0.075 ಮೀಟರ್)
- 03.75 ಮೀ ಅಗಲದ 0.400 ಕಿ.ಮೀ ಉದ್ದದ ರಸ್ತೆಯಲ್ಲಿ Grade-3 Metalling (0.075 ಮೀಟರ್)

2. ರಾಜ್ಯ ಸರ್ಕಾರದ ಯೋಜನೆಯಡಿ ನಿಗಧಿಪಡಿಸಿರುವ ರೂ.3.50 ಲಕ್ಷಗಳಲ್ಲಿ

- 03.75 ಮೀ ಅಗಲದ 0.600 ಕಿ.ಮೀ ಉದ್ದದ ರಸ್ತೆಯಲ್ಲಿ Grade-3 Metalling (0.075 ಮೀಟರ್)
- 0.200 ಕಿ.ಮೀ ಉದ್ದದ ಆಯ್ದು ಚೈನೇಜ್‌ಗಳಲ್ಲಿ ರಸ್ತೆ ಬದಿ ಮೋಲ್ಕ್ರೆ ಚರಂಡಿ

**ಯೋಜನಾ ಅನುದಾನ:**

| **ಕ್ರ.ಸಂ** | **ಕಾರ್ಯಕ್ರಮ** | **ಯೋಜನೆ** | **ಪ್ರತಿ ರಸ್ತೆಗೆ ನಿಗಧಿಪಡಿಸಿದ ಅನುದಾನ (ರೂ.ಲಕ್ಷಗಳಲ್ಲಿ)** |
|---|---|---|---|
| 1. | 03.75 ಮೀ ಅಗಲದ 01.00 ಕಿ.ಮೀ ಉದ್ದದ ರಸ್ತೆಯಲ್ಲಿ Formation of road | ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ | **9.00** |
| 2. | 03.75 ಮೀ ಅಗಲದ 01.00 ಕಿ.ಮೀ ಉದ್ದದ ರಸ್ತೆಯಲ್ಲಿ Grade-2 Metalling (0.075 ಮೀಟರ್) | | |
| | | | |

| | | | |
|---|---|---|---|
| 3. | 03.75 ಮೀ ಅಗಲದ 0.400 ಕಿ.ಮೀ ಉದ್ದದ ರಸ್ತೆಯಲ್ಲಿ Grade-3 Metalling (0.075 ಮೀಟರ್) | | |
| 4. | 03.75 ಮೀ ಅಗಲದ 0.600 ಕಿ.ಮೀ ಉದ್ದದ ರಸ್ತೆಯಲ್ಲಿ Grade-3 Metalling (0.075 ಮೀಟರ್) | ರಾಜ್ಯ ಸರ್ಕಾರದ ಅನುದಾನ | **3.50** |

ಈ ಯೋಜನೆಗೆ ಇತರೆ ಮೂಲಗಳಿಂದ ದೊರೆಯಬಹುದಾದ ತಾಲ್ಲೂಕು ಪಂಚಾಯಿತಿ/ಜಿಲ್ಲಾ ಪಂಚಾಯಿತಿಗಳಲ್ಲಿ ಲಭ್ಯವಿರುವ ಅನುದಾನ, ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಅನುದಾನ, (MLA LAD Fund), ಸಾಮಾಜಿಕ ಹೊಣೆಗಾರಿಕೆ ಕಾರ್ಯನೀತಿ ನಿಧಿ (CSR Fund), ಅನುದಾನವನ್ನು ಒಗ್ಗೂಡಿಸುವ ಮೂಲಕ ಅನುಷ್ಠಾನಗೊಳಿಸಬಹುದಾಗಿದೆ.

**ಅನುಷ್ಠಾನ ಸಂಸ್ಥೆಗಳು:**

- **ಗ್ರಾಮ ಪಂಚಾಯಿತಿಗಳು**
- **ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ**

**5) ಪ್ರಗತಿ ವರದಿ**

ಕಾಮಗಾರಿಗಳ ಪ್ರಗತಿ ವರದಿಯನ್ನು ಆಯಾ ಮಾಹೆಯ 5ನೇ ತಾರೀಖಿನೊಳಗೆ ನಿಗಧಿತ ನಮೂನೆಗಳಲ್ಲಿ ತಪ್ಪದೇ ಸರ್ಕಾರಕ್ಕೆ ಸಲ್ಲಿಸುವುದು.

**6) ಹಣ ಬಳಕೆ ಪ್ರಮಾಣ ಪತ್ರ**

2022-23ನೇ ಸಾಲಿನಲ್ಲಿ ಬಿಡುಗಡೆಯಾದ ಅನುದಾನಕ್ಕೆ ಸಂಬಂಧಿಸಿದಂತೆ ಭರಿಸಲಾದ ವೆಚ್ಚಕ್ಕೆ ನಿಗಧಿತ ನಮೂನೆಯಲ್ಲಿ ಹಣ ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸುವುದು.

**7) ದಾಖಲೆಗಳ ನಿರ್ವಹಣೆ**

- ಆಯ್ಕೆಯಾದ ಪ್ರತಿಯೊಂದು ರಸ್ತೆ ಕಾಮಗಾರಿಗೆ ಪ್ರತ್ಯೇಕವಾದ ಕಡತವನ್ನು ಕಡ್ಡಾಯವಾಗಿ ನಿರ್ವಹಿಸತಕ್ಕದ್ದು.
- ಅನುಮೋದಿತ ಕ್ರಿಯಾ ಯೋಜನೆಯಲ್ಲಿನ ಕಾಮಗಾರಿಗಳ ಸಂಖ್ಯೆ, ಅನುಮೋದಿತ ಮೊತ್ತ, ಬಿಡುಗಡೆಯಾದ ಅನುದಾನ, ಅನುಮೋದಿತ ಗುತ್ತಿಗೆದಾರರ ಹೆಸರು ಮತ್ತು ವಿಳಾಸ, ಕಾಮಗಾರಿ ಪೂರ್ಣಗೊಂಡ ವಿವರ ಮತ್ತು ದಿನಾಂಕ, ಆರ್ಥಿಕ ವರ್ಷ ಹಾಗೂ ಇನ್ನಿತರೆ ವಿವರಗಳನ್ನು ಕಾಮಗಾರಿವಾರು ಗ್ರಾಮ ಪಂಚಾಯತಿ ರಿಜಿಸ್ಟರ್‌ನಲ್ಲಿ ನಮೂದಿಸತಕ್ಕದ್ದು
- ಅನುಮೋದಿತ ಕಾಮಗಾರಿ ಪೂರ್ಣಗೊಂಡ ಜಾಗದಲ್ಲಿ ಮೇಲಿನ ವಿವರಗಳನ್ನು ನಾಮಫಲಕದಲ್ಲಿ ಬರೆಯತಕ್ಕದ್ದು.

8) ನಿರ್ವಹಣೆ ಹಾಗೂ ಜವಾಬ್ದಾರಿ

ಕಾಮಗಾರಿ ಪೂರ್ಣಗೊಂಡ ನಂತರ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ನಿರ್ವಹಣೆ ಮಾಡತಕ್ಕದ್ದು ಹಾಗೂ ಪ್ರತಿ ಕಾಮಗಾರಿಯ ಪ್ರಾಥಮಿಕ ಹಂತದಿಂದ ಮುಕ್ತಾಯದ ಹಂತದವರೆಗೆ (ಕಾರ್ಯಕ್ಷಮತೆ) ಗ್ರಾಮ ಪಂಚಾಯಿತಿಗೆ ಜವಾಬ್ದಾರಿ ಮತ್ತು ಹೊಣೆಗಾರಿಕೆಯನ್ನು ನೀಡಿದೆ.

28/10/2022

(ಎಲ್.ಕೆ.ಅತೀಕ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ

ಇವರಿಗೆ

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ

ಪ್ರತಿಯನ್ನು:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಬಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು
2. ಆಯುಕ್ತರು (ಗ್ರಾಮೀಣಾಭಿವೃದ್ದಿ) ಗ್ರಾಮೀಣಾಭಿವೃದ್ಧಿ, ಆಯುಕ್ತಾಲಯ, ಬೆಂಗಳೂರು.
3. ಮುಖ್ಯ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.